All India Radio: Bangalore
National Bulletin In Kannada
07.04.2026  19.35 hrs
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ಕೇರಳ, ಅಸ್ಸಾಂ, ಪುದುಚೆರಿ ವಿಧಾನಸಭೆ ಚುನಾವಣೆ; ಬಹಿರಂಗ ಪ್ರಚಾರಕ್ಕೆ ತೆರೆ
- ದೇಶಾದ್ಯಂತ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ, ಪಿಎನ್‌ಜಿ ಪೂರೈಕೆಯಲ್ಲಿ ಯಾವುದೇ ಸಮಸ್ಯೆ ಇಲ್ಲ - ಕೇಂದ್ರ ಸರ್ಕಾರ
- ಮಣಿಪುರದಲ್ಲಿ ಬಾಂಬ್ ದಾಳಿ; ಇಬ್ಬರು ಮಕ್ಕಳ ಸಾವು
- ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ - ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿ

***************

ಅಸ್ಸಾಂ, ಕೇರಳ ಮತ್ತು ಕೇಂದ್ರಾಡಳಿತ ಪ್ರದೇಶವಾದ ಪುದುಚೆರಿಯ ವಿಧಾನಸಭಾ ಚುನಾವಣೆಯ ಬಹಿರಂಗ ಪ್ರಚಾರಕ್ಕೆ ಇಂದು ತೆರೆಬಿದ್ದಿದೆ.

ವಿವಿಧ ರಾಜಕೀಯ ಪಕ್ಷಗಳ ನಾಯಕರು ಮತದಾರರನ್ನು ಸೆಳೆಯಲು ಕೊನೆಯ ಕ್ಷಣದ ಬಿರುಸಿನ ಪ್ರಚಾರ ನಡೆಸಿದರು.

ಅಸ್ಸಾಂನ ೧೨೬, ಕೇರಳದ ೧೪೦ ಮತ್ತು ಪುದುಚೇರಿಯ ೩೦ ಸ್ಥಾನಗಳಿಗೆ ಇದೇ ೯ ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ.

ಅಸ್ಸಾಂನ ಪಥರ್ ಕಾಂಡಿಯಲ್ಲಿ ನಡೆದ ಚುನಾವಣಾ ರ್‍ಯಾಲಿಯಲ್ಲಿ ಕೇಂದ್ರ ಗೃಹ ಸಚಿವ ಅಮಿತ್ ಶಾ ಪಾಲ್ಗೊಂಡರು. ಈ ವೇಳೆ ಮಾತನಾಡಿದ ಅವರು, ಗಡಿ ನುಸುಳುವಿಕೆ ತಡೆಗೆ ತಮ್ಮ ಪಕ್ಷ ಬದ್ಧವಾಗಿದ್ದು, ಪಶ್ಚಿಮ ಬಂಗಾಳದಲ್ಲಿ ಅಧಿಕಾರಕ್ಕೆ ಬಂದರೆ ಎಲ್ಲ ನುಸುಳುಕೋರರನ್ನು ಅವರ ದೇಶಗಳಿಗೆ ಮರಳಿ ಕಳುಹಿಸಲಾಗುವುದು ಎಂದು ಆಶ್ವಾಸನೆ ನೀಡಿದರು.

ಕೇರಳದ ಕಲ್ಪೆಟ್ಟಾದಲ್ಲಿ ಇಂದು ಕಾಂಗ್ರೆಸ್ ಹಿರಿಯ ನಾಯಕಿ ಪ್ರಿಯಾಂಕ ವಾದ್ರಾ ಚುನಾವಣಾ ರ್‍ಯಾಲಿಯನ್ನುದ್ದೇಶಿಸಿ ಮಾತನಾಡಿದರು. ಈ ವೇಳೆ ಅವರು, ಎಲ್‌ಡಿಎಫ್ ಸರ್ಕಾರಾವಧಿಯಲ್ಲಿ ಜನರ ಸಮಸ್ಯೆಗಳು ಮತ್ತಷ್ಟು ಹೆಚ್ಚಾಗಿವೆ ಎಂದು ಆರೋಪಿಸಿದರು.

ಪುದುಚೇರಿಯಲ್ಲಿ ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಜೆ.ಪಿ.ನಡ್ಡಾ, ಡಿಎಂಕೆ ನಾಯಕ ಮತ್ತು ತಮಿಳುನಾಡು ಉಪಮುಖ್ಯಮಂತ್ರಿ ಉದಯನಿಧಿ ಸ್ಟಾಲಿನ್ ಸೇರಿದಂತೆ ಹಲವು ರಾಜಕೀಯ ಪಕ್ಷಗಳ ಮುಖಂಡರು ತಮ್ಮ ಅಭ್ಯರ್ಥಿಗಳ ಪರವಾಗಿ ಚುನಾವಣಾ ಪ್ರಚಾರ ಕಾರ್ಯದಲ್ಲಿ ತೊಡಗಿದರು.

ತಮಿಳುನಾಡಿನ ಎಲ್ಲಾ ೨೩೪ ಸ್ಥಾನಗಳಿಗೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ೧೫೨ ಕ್ಷೇತ್ರಗಳಿಗೆ ಈ ತಿಂಗಳ ೨೩ ರಂದು ಮತದಾನ ನಡೆಯಲಿದೆ. ಎಲ್ಲಾ ರಾಜ್ಯಗಳ ಚುನಾವಣಾ ಫಲಿತಾಂಶ ಮೇ ೪ ರಂದು ಪ್ರಕಟವಾಗಲಿದೆ.

***************

ದೇಶಾದ್ಯಂತ ಪೆಟ್ರೋಲ್, ಡೀಸೆಲ್, ಎಲ್‌ಪಿಜಿ ಮತ್ತು ಪಿಎನ್‌ಜಿ ಪೂರೈಕೆ ಸಾಮಾನ್ಯವಾಗಿದೆ ಎಂದು ಕೇಂದ್ರ ಸರ್ಕಾರ ಹೇಳಿದೆ.

ನವದೆಹಲಿಯಲ್ಲಿ ಇಂದು ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲದ ಜಂಟಿ ಕಾರ್ಯದರ್ಶಿ ಸುಜಾತಾ ಶರ್ಮಾ, ದೇಶಾದ್ಯಂತ ಎಲ್‌ಪಿಜಿ ವಿತರಕರಲ್ಲಿ ಸಾಕಷ್ಟು ದಾಸ್ತಾನು ಲಭ್ಯವಿದೆ. ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ವಿತರಣೆಯಲ್ಲಿ ಕೊರತೆಯಾಗಿರುವುದರ ಬಗ್ಗೆ ಯಾವುದೇ ವರದಿಯಾಗಿಲ್ಲ ಎಂದು ತಿಳಿಸಿದರು.

ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆಯು ಸುಗಮವಾಗಿ ಮುಂದುವರಿದಿದೆ. ಆನ್‌ಲೈನ್ ಎಲ್‌ಪಿಜಿ ಬುಕ್ಕಿಂಗ್‌ಗಳು ಸುಮಾರು ಶೇಕಡ ೯೭ಕ್ಕೆ ಏರಿಕೆಯಾಗಿದೆ. ಐದು ಕೆಜಿ ಎಲ್‌ಪಿಜಿ ಸಿಲಿಂಡರ್‌ಗಳ ವಿತರಣೆಯನ್ನು ದ್ವಿಗುಣಗೊಳಿಸುವಂತೆ ಹೊಸದಾಗಿ ಆದೇಶ ಹೊರಡಿಸಲಾಗಿದೆ ಎಂದು ಸುಜಾತಾ ಶರ್ಮಾ ಮಾಹಿತಿ ನೀಡಿದರು.

***************

ಮಣಿಪುರದ ಬಿಷ್ಣುಪುರ ಜಿಲ್ಲೆಯ ಟ್ರೊಂಗ್ಲಾಬಿ ಗ್ರಾಮದಲ್ಲಿ ಶಂಕಿತ ಭಯೋತ್ಪಾದಕರು ಬಾಂಬ್ ದಾಳಿ ನಡೆಸಿದ್ದು, ಇಬ್ಬರು ಮಕ್ಕಳು ಸಾವನ್ನಪ್ಪಿದ್ದಾರೆ. ಘಟನೆಯಲ್ಲಿ ಅವರ ತಾಯಿ ಗಾಯಗೊಂಡಿದ್ದು, ಇಂಫಾಲ್‌ನ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಪೊಲೀಸರು ಗ್ರಾಮದಿಂದ ಬಾಂಬ್ ವಶಪಡಿಸಿಕೊಂಡು, ಸುರಕ್ಷಿತವಾಗಿ ನಿಷ್ಕ್ರಿಯಗೊಳಿಸಿದ್ದಾರೆ.

ಘಟನೆಯ ಬಳಿಕ ಕಣಿವೆಯ ಐದು ಜಿಲ್ಲೆಗಳಲ್ಲಿ ವ್ಯಾಪಕ ಪ್ರತಿಭಟನೆ ನಡೆದಿದೆ. ಮುನ್ನೆಚ್ಚರಿಕಾ ಕ್ರಮವಾಗಿ ಈ ಜಿಲ್ಲೆಗಳಲ್ಲಿನ ಇಂಟರ್‌ನೆಟ್ ಸೇವೆಗಳನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮೂರು ದಿನಗಳವರೆಗೆ ನಿಷೇಧಿಸಲಾಗಿದೆ ಎಂದು ಮಣಿಪುರದ ಗೃಹ ಇಲಾಖೆ ಆದೇಶ ಹೊರಡಿಸಿದೆ.

ದಾಳಿಯನ್ನು ಮುಖ್ಯಮಂತ್ರಿ ಯುಮ್ನಾಮ್ ಖೇಮ್‌ಚಂದ್ ಖಂಡಿಸಿದ್ದಾರೆ. ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಘಟನೆಯನ್ನು ಎನ್‌ಐಎ ತನಿಖೆಗೆ ಹಸ್ತಾಂತರಿಸಲಾಗುವುದು. ದುಷ್ಕರ್ಮಿಗಳನ್ನು ಶೀಘ್ರವೇ ಪತ್ತೆಹಚ್ಚಲಾಗುವುದು ಎಂದು ಹೇಳಿದ್ದಾರೆ.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಅವರು ನವದೆಹಲಿಯಲ್ಲಿ ಇಂದು ಭಾರತ ಮತ್ತು ಆಫ್ರಿಕಾ ಸಂಬಂಧಗಳ ಕುರಿತು ಸಮಾಲೋಚನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿದ್ದರು.

ವ್ಯಾಪಾರ ಮತ್ತು ಹೂಡಿಕೆ, ಸಾಲ ಮತ್ತು ಅನುದಾನ, ವಿಶೇಷವಾಗಿ ಶಿಕ್ಷಣ ಮತ್ತು ಕೌಶಲ್ಯದಲ್ಲಿ ಸಾಮರ್ಥ್ಯ ವೃದ್ಧಿ ರಕ್ಷಣೆ ಹಾಗೂ ಪ್ರಾದೇಶಿಕ ಮತ್ತು ಜಾಗತಿಕ ವೇದಿಕೆಗಳಲ್ಲಿ ಸಹಕಾರ ಸೇರಿದಂತೆ ವಿವಿಧ ವಿಷಯಗಳ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯು ಭಾರತದ ಐತಿಹಾಸಿಕ ಸಂಬಂಧ ಮತ್ತು ಆಫ್ರಿಕಾದೊಂದಿಗಿನ ಬಲವಾದ ಜನರಿಂದ ಜನರ ಸಂಪರ್ಕವನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

***************

ಆಹಾರ ಭದ್ರತೆಯನ್ನು ಖಚಿತಪಡಿಸುವುದು ಮತ್ತು ರೈತರ ಆದಾಯ ಹೆಚ್ಚಿಸುವುದು ಸರ್ಕಾರದ ಪ್ರಮುಖ ಆದ್ಯತೆಗಳಾಗಿವೆ ಎಂದು ಕೇಂದ್ರ ಕೃಷಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ.

ರಾಜಸ್ಥಾನದ ಜೈಪುರದಲ್ಲಿಂದು ಹಮ್ಮಿಕೊಳ್ಳಲಾಗಿದ್ದ ಒಂದು ದಿನದ ಪ್ರಾದೇಶಿಕ ಕೃಷಿ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಕೃಷಿ ವಲಯ ಬಲಪಡಿಸಲು ಸರ್ಕಾರ ಬಹು ಆಯಾಮದ ಪ್ರಯತ್ನಗಳನ್ನು ಮಾಡುತ್ತಿದೆ. ರೈತರು ಸ್ವಾವಲಂಬಿಗಳಾಗಲು ಕೃಷಿಯಲ್ಲಿ ವೈವಿಧ್ಯೀಕರಣ ಅಗತ್ಯವಿದ್ದು, ಆಧುನಿಕ ತಂತ್ರಜ್ಞಾನ ಮತ್ತು ಸಮಗ್ರ ಕೃಷಿ ಪದ್ಧತಿ ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದರು.

***************

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ಇಂದು ಸೇಂಟ್ ಕಿಟ್ಸ್ ಮತ್ತು ನೆವಿಸ್ ವಿದೇಶಾಂಗ ಸಚಿವ ಡಾ. ಡೆನ್ಸಿಲ್ ಎಲ್. ಡೌಗ್ಲಾಸ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.

ಉಭಯ ದೇಶಗಳ ನಡುವೆ ಅಭಿವೃದ್ಧಿ ಯೋಜನೆಗಳು, ಆರೋಗ್ಯ ಸಹಕಾರ, ಡಿಜಿಟಲ್ ಸಾಮರ್ಥ್ಯ ಮತ್ತು ವಿಪತ್ತು ಪ್ರತಿಕ್ರಿಯೆಯ ಕುರಿತು ಇಬ್ಬರೂ ನಾಯಕರು ಚರ್ಚೆ ನಡೆಸಿದರು. ಇದೇ ವೇಳೆ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಉಭಯ ನಾಯಕರು ಅಭಿಪ್ರಾಯ ವಿನಿಮಯ ಮಾಡಿಕೊಂಡರು.

***************

ಗುಜರಾತಿಗಳ ಬಗ್ಗೆ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆಯನ್ನು ಬಿಜೆಪಿ ಖಂಡಿಸಿದೆ.

ನವದೆಹಲಿಯ ಬಿಜೆಪಿ ಪ್ರಧಾನ ಕಚೇರಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಬಿಜೆಪಿ ಹಿರಿಯ ನಾಯಕ ರವಿಶಂಕರ್ ಪ್ರಸಾದ್, ಗುಜರಾತಿಗಳು ಅವಿದ್ಯಾವಂತರು ಎಂಬ ಮಲ್ಲಿಕಾರ್ಜುನ ಖರ್ಗೆ ಅವರ ಹೇಳಿಕೆ ಖಂಡನೀಯ. ಚುನಾವಣೆಗಳು ಬರುತ್ತವೆ ಮತ್ತು ಹೋಗುತ್ತವೆ. ಆದರೆ, ಕಾಂಗ್ರೆಸ್ ಅಧ್ಯಕ್ಷರು ಎಲ್ಲಾ ಸಭ್ಯತೆಯನ್ನು ತೊರೆದಿದ್ದಾರೆ ಎಂದು ದೂರಿದರು.

ಗುಜರಾತ್‌ನ ಸಾಕ್ಷರತಾ ಪ್ರಮಾಣ ಶೇಕಡ ೮೨ ರಷ್ಟಿದೆ. ಮಲ್ಲಿಕಾರ್ಜುನ ಖರ್ಗೆ ಅವರು ಗುಜರಾತ್ ಜನರ ಕ್ಷಮೆಯಾಚಿಸಬೇಕು ಎಂದು ಅವರು ಒತ್ತಾಯಿಸಿದರು.

***************

ಶ್ರೀಲಂಕಾದ ಜೈಲುಗಳಿಂದ ಬಿಡುಗಡೆಯಾದ ೩೦ ಭಾರತೀಯ ಮೀನುಗಾರರು ಇಂದು ವಿಮಾನದ ಮೂಲಕ ಚೆನ್ನೈ ತಲುಪಿದರು.

ರಾಮೇಶ್ವರಂ ಮತ್ತು ಕಾರೈಕಲ್‌ನ ಮೀನುಗಾರರು, ಪಂಬನ್ ಬಳಿ ಮೀನುಗಾರಿಕೆ ನಡೆಸುತ್ತಿದ್ದರು. ಅಂತಾರಾಷ್ಟ್ರೀಯ ಗಡಿಯೊಳಗೆ ಅತಿಕ್ರಮಣ ಪ್ರವೇಶ ಮಾಡಿದ್ದಾಕ್ಕಾಗಿ ಶ್ರೀಲಂಕಾ ನೌಕಾಪಡೆ ಅಧಿಕಾರಿಗಳು ಅವರನ್ನು ಬಂಧಿಸಿದ್ದರು.

ನಂತರ ಅವರನ್ನು ಜೈಲಿಗೆ ಹಾಕಲಾಗಿತ್ತು. ರಾಜತಾಂತ್ರಿಕ ಮಾರ್ಗಗಳ ಮಧ್ಯಸ್ಥಿಕೆಯ ನಂತರ ಅವರನ್ನು ಜೈಲಿನಿಂದ ಬಿಡುಗಡೆ ಮಾಡಿ ಭಾರತಕ್ಕೆ ಹಸ್ತಾಂತರಿಸಲಾಯಿತು.

***************

ಕೇಂದ್ರ ಸಂಸ್ಕೃತಿ ಸಚಿವಾಲಯವು ವಂದೇ ಮಾತರಂ ಫ್ರೇಮ್ಸ್ ರಾಷ್ಟ್ರೀಯ ಚಲನಚಿತ್ರ ನಿರ್ಮಾಣ ಸ್ಪರ್ಧೆಗೆ ದೇಶದ ಚಲನಚಿತ್ರ ನಿರ್ಮಾಪಕರು ಮತ್ತು ಸೃಜನಶೀಲ ಉತ್ಸಾಹಿಗಳನ್ನು ಆಹ್ವಾನಿಸಿದೆ.

ತಮ್ಮ ವಿಶಿಷ್ಟ ಕಥೆ ಹೇಳುವ ಮೂಲಕ ವಂದೇ ಮಾತರಂನ ಚೈತನ್ಯವನ್ನು ಪಸರಿಸಲು, ಈ ಸ್ಪರ್ಧೆಯು ಭಾಗವಹಿಸುವವರು ತಮ್ಮ ಸೃಜನಶೀಲತೆ, ನಾವೀನ್ಯತೆ ಮತ್ತು ಸಿನಿಮೀಯ ಕೌಶಲ್ಯಗಳನ್ನು ಪ್ರದರ್ಶಿಸಲು ಮತ್ತು ರಾಷ್ಟ್ರದ ಬಗ್ಗೆ ಹೆಮ್ಮೆ ವ್ಯಕ್ತಪಡಿಸಲು ಒಂದು ವೇದಿಕೆಯನ್ನು ಒದಗಿಸುತ್ತದೆ.

ಕಲಾತ್ಮಕ ಅಭಿವ್ಯಕ್ತಿಯನ್ನು ಉತ್ತೇಜಿಸುವುದು ಮತ್ತು ವಂದೇ ಮಾತರಂ ಹಾಡಿನ ಸಾಂಸ್ಕೃತಿಕ ಮತ್ತು ದೇಶಭಕ್ತಿಯ ಮಹತ್ವದೊಂದಿಗೆ ಆಳವಾದ ಸಂಪರ್ಕವನ್ನು ಪ್ರೇರೇಪಿಸುವುದು ಈ ಉಪಕ್ರಮದ ಗುರಿಯಾಗಿದೆ.

ಸ್ಪರ್ಧೆಯು ವ್ಯಕ್ತಿಗಳು ಮತ್ತು ತಂಡಗಳಿಗೆ ಮುಕ್ತವಾಗಿದೆ. ಭಾಗವಹಿಸುವವರು ತಮ್ಮ ಚಲನಚಿತ್ರ ನಮೂದುಗಳನ್ನು http://vandemataram150.in ಮೂಲಕ ಸಲ್ಲಿಸಬಹುದು.

***************

ಬಾಂಗ್ಲಾದೇಶಕ್ಕೆ ಭಾರತದ ಹೈಕಮಿಷನರ್ ಪ್ರಣಯ್ ವರ್ಮಾ ಅವರು ಬಾಂಗ್ಲಾದೇಶ ಪ್ರಧಾನಿ ತಾರಿಕ್ ರೆಹಮಾನ್ ಅವರನ್ನು ಭೇಟಿಯಾಗಿ ಉಭಯ ದೇಶಗಳ ನಡುವೆ ದ್ವಿಪಕ್ಷೀಯ ಸಂಬಂಧಗಳನ್ನು ಬಲಪಡಿಸುವ ಬದ್ಧತೆಯನ್ನು ಪುನರುಚ್ಚರಿಸಿದರು.

ಸಾರ್ವಜನಿಕ ಆರೋಗ್ಯ, ಆರ್ಥಿಕ ಸೇರ್ಪಡೆ, ಮಹಿಳಾ ಸಬಲೀಕರಣ, ಗ್ರಾಮೀಣಾಭಿವೃದ್ಧಿ, ವ್ಯಾಪಾರ ಮತ್ತು ಹೂಡಿಕೆ, ತಂತ್ರಜ್ಞಾನ ಪಾಲುದಾರಿಕೆ, ಇಂಧನ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಉಭಯ ದೇಶಗಳ ನಡುವಿನ ಸಹಕಾರ ಬಲಗೊಳಿಸುವ ನಿಟ್ಟಿನಲ್ಲಿ ಚರ್ಚೆ ನಡೆಯಿತು ಎಂದು ಬಾಂಗ್ಲಾದೇಶದಲ್ಲಿರುವ ಭಾರತೀಯ ಹೈಕಮಿಷನ್ ತಿಳಿಸಿದೆ.

***************

ಗುವಾಹಟಿಯ ಬರ್ಸಾಪುರ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾದಲ್ಲಿ ರಾಜಸ್ಥಾನ ರಾಯಲ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಮಳೆಯ ಕಾರಣ ಪಂದ್ಯ ತಡವಾಗಿದೆ.

******ಮುಕ್ತಾಯ********